ಅತ್ಯಂತ ಹೆಚ್ಚಿನ ರೀತಿಯಲ್ಲಿ ಅರ್ಥಪೂರ್ಣತೆಯನ್ನು ಒದಗಿಸಿಕೊಡಬೇಕೆಂದು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರ ವಹಿಸಬೇಕೆಂದು ಎಲ್ಲರಲ್ಲೂ ವಿನಂತಿಸುತ್ತಾ, ಈ ವಿಷಯವನ್ನು ಇಲ್ಲಿಗೆ ಮುಕ್ತಾಯಗೊಳಿಸುತ್ತೇನೆ.

ಸದನದ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಹತ್ತನೇ ವಿಧಾನ ಸಭೆಯ ಎರಡನೆಯ ಅಧಿವೇಶದಲ್ಲಿನ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ ಈ ಕೆಳಕಂಡಂತಿದೆ:

ಸೋಮವಾರ, ದಿನಾಂಕ 20ನೇ ಮಾರ್ಚ್ 1995ರಂದು ಪ್ರಾರಂಭವಾದ ಈ ಸದನವು 21 ದಿನಗಳ ಕಾರ್ಯಕಲಾಪದ ನಂತರ ಇಂದು ಮುಕ್ತಾಯವಾಗಲಿದೆ.

ಒಟ್ಟು 125 ಗಂಟೆಗಳ ಕಾರ್ಯಕಲಾಪಗಳನ್ನು ನಡೆಸಲಾಗಿರುತ್ತದೆ. ಈ ಅವಧಿಯಲ್ಲಿ ಸದನಕ್ಕೆ ಮೊಟ್ಟ ಮೊದಲ—ಬಾರಿಗೆ—ಆಯ್ಕೆಗೊಂಡು ಬಂದಿರುವ 74 ಸದಸ್ಯರುಗಳು ಸಹ ವಿವಿಧ ಕಾರ್ಯಕಲಾಪಗಳಲ್ಲಿ ಭಾಗವಹಿಸಿರುತ್ತಾರೆ.

ಇತ್ತೀಚೆಗೆ ನಿಧನರಾದ 12 ಗಣ್ಯರುಗಳ ಗೌರವಾರ್ಥ ಈ ಅಧಿವೇಶನದಲ್ಲಿ ಸಂತಾಪವನ್ನು ಸೂಚಿಸಲಾಯಿತು.

ಈ ಅವಧಿಯಲ್ಲಿ 1298 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 200 ಚುಕ್ಕೆ ಗುರುತಿನ ಪ್ರಶ್ನೆಗಳನ್ನು, 801 ಚುಕ್ಕೆ ರಹಿತ ಪ್ರಶ್ನೆಗಳನ್ನು ಉತ್ತರಿಸಲಾಯಿತು.

ಗಮನ ಸೆಳೆಯುವ 16 ಸೂಚನೆಗಳಿಗೆ ಸಂಬಂಧಪಟ್ಟ ಮಂತ್ರಿಗಳು ಸದನದಲ್ಲಿ ಹೇಳಿಕೆ ನೀಡಿದರು.

ಮೂರು ಅರ್ಜಿಗಳನ್ನು ಸ್ವೀಕರಿಸಿದ್ದು ಒಂದು ಅರ್ಜಿಯನ್ನು ಸದನದಲ್ಲಿ ಮಂಡಿಸಲಾಯಿತು. ಅರ್ಧ ಗಂಟೆ ಚರ್ಚೆಗೆ 3 ಸೂಚನೆಗಳನ್ನು ಸ್ವೀಕರಿಸಲಾಯಿತು, ಆ ಪೈಕಿ ಯಾವುದನ್ನೂ ಚರ್ಚೆಗೆ ತೆಗೆದುಕೊಳ್ಳಲಿಲ್ಲ. ಖಾಸಗಿ ಸದಸ್ಯರ ಎರಡು ನಿರ್ಣಯಗಳನ್ನು ಸ್ವೀಕರಿಸಿದ್ದು, ಆ ಪೈಕಿ ಒಂದು ನಿರ್ಣಯವನ್ನು ಚರ್ಚೆಗೆ ತೆಗೆದುಕೊಳ್ಳಲಾಯಿತು. ನಿಯಮ 351ರಲ್ಲಿ 148 ಸೂಚನೆಗಳನ್ನು ಸ್ವೀಕರಿಸಿದ್ದು, 15 ಸೂಚನೆಗಳನ್ನು ಸದನದಲ್ಲಿ ಪ್ರಸ್ತಾಪಿಸಲಾಯಿತು.

ಈ ಅವಧಿಯಲ್ಲಿ ಏಳು ನಿಲುವಳಿ ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳಿಗೆ ಅಂಗೀಕಾರವನ್ನು ತಡೆ ಹಿಡಿಯಲಾಯಿತು.

ಒಂದು ಸೂಚನೆಯನ್ನು ನಿಯಮ 69ರಡಿಯಲ್ಲಿ ಚರ್ಚೆಗೆ ತೆಗೆದುಕೊಳ್ಳಲಾಯಿತು.

ಈ ಅವಧಿಯಲ್ಲಿ 202 ಕಾಗದ ಪತ್ರಗಳನ್ನು ಸದನದಲ್ಲಿ ಒಪ್ಪಿಸಲಾಯಿತು.

1995-96ನೇ ಸಾಲಿನ ಅನುದಾನ ಬೇಡಿಕೆಗಳ ಮೇಲೆ 3 ದಿವಸ ಚರ್ಚೆ ನಡೆಸಿ ಮತಕ್ಕೆ ಹಾಕಿ ಅಂಗೀಕರಿಸಲಾಯಿತು.

ಈ ಅವಧಿಯಲ್ಲಿ ಒಟ್ಟು 18 ವಿಧೇಯಕಗಳನ್ನು ಸದನದಲ್ಲಿ ಮಂಡಿಸಲಾಯಿತು. ಆ ಪೈಕಿ 18 ವಿಧೇಯಕಗಳನ್ನು ಪರ್ಯಾಲೋಚಿಸಿ ಅಂಗೀಕರಿಸಲಾಯಿತು.

ಈ ಅಧಿವೇಶನದ ಅವಧಿಯಲ್ಲಿ ಒಂದು ಶಾಸನಾತ್ಮಕ ನಿರ್ಣಯವನ್ನು ಚರ್ಚಿಸಿ ಅಂಗೀಕರಿಸಲಾಯಿತು.

ವಿವಿಧ ವಿರೋಧ ಪಕ್ಷಗಳ ಸದಸ್ಯರು ನಾಲ್ಕು ಬಾರಿ ಸಭಾತ್ಯಾಗ ಮಾಡಿರುತ್ತಾರೆ.

ಸದನದ ಕಾರ್ಯಕಲಾಪಗಳಲ್ಲಿ ಭಾಗವಹಿಸಿ ನನ್ನೊಡನೆ ಸಹಕರಿಸಿದ ನನ್ನೊಡನೆ ಸಹಕರಿಸಿದ ವಿಧಾನ ಸಭೆ ಸದಸ್ಯರಿಗೆ, ಮಂತ್ರಿ ಮಂಡಲದ ಸದಸ್ಯರಿಗೆ, ಪತ್ರಕರ್ತರಿಗೆ, ಆಕಾಶವಾಣಿ ಮತ್ತು ದೂರದರ್ಶನ ಹಾಗೂ ಇಲಾಖಾ ಅಧಿಕಾರಿಗಳಿಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ.

ಈ ಸಭೆಯನ್ನು ಅನಿರ್ಧಿಷ್ಟ ಕಾಲದವರೆಗೆ ಮುಂದುಡುತ್ತಿದ್ದೇನೆ

(ಸಭೆಯು ರಾತ್ರಿ 9-42ಕ್ಕೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)